1229 (1540) ಶ್ರೀ ವೈಜನಾಥ ಪಾಟೀಲ್ (ಚಿಂಚೋಳಿ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೈತರು, ನೇಕಾರರು ಮತ್ತು ಮೀನುಗಾರರಿಗೆ ನೀಡುವ ಸಾಲ ಮತ್ತು ಬಡ್ಡಿ ಮನ್ನಾದಿಂದ ಸರ್ಕಾರಕ್ಕೆ ಬರಲಿರುವ ಹೆಚ್ಚಿನ ಆರ್ಥಿಕ ಹೊರೆಯೆಷ್ಟು? (ಜಿಲ್ಲಾವಾರು ವಿವರ ನೀಡುವುದು);

ಆ) ಸಾಲ ಮನ್ನಾ ಮತ್ತು ಬಡ್ಡಿ ಮನ್ನಾ ಕ್ರಮದಿಂದ ಸಹಕಾರಿ ಸಂಸ್ಥೆಗಳಿಗೆ ಆಗುವ ನಷ್ಟವನ್ನು ಸರ್ಕಾರ ಎಷ್ಟು ಕಾಲಾವಧಿಯೊಳಗೆ ಭರಿಸುವುದು?

ಇ) ರೈತರು ಪಟ್ಟಣ ಸಹಕಾರ ಬ್ಯಾಂಕ್‌ಗಳಲ್ಲಿ ಪಡೆದ ಸಾಲ ಮತ್ತು ಬಡ್ಡಿ ಮನ್ನಾ ಮಾಡಲಾಗಿದೆಯೇ?

ಈ) ಮಾಡಿದ್ದಲ್ಲಿ, ಪ್ರತ್ಯೇಕ ವಿವರ ನೀಡುವುದು?

ಶ್ರೀ ಜಿ. ಟಿ. ದೇವೇಗೌಡ (ಸಹಕಾರ ಸಚಿವರು) :

ಅ) 2006–07ರಲ್ಲಿ ರಾಜ್ಯದಲ್ಲಿ ರೈತರಿಗೆ, ನೇಕಾರರಿಗೆ ಮತ್ತು ಮೀನುಗಾರರಿಗೆ ಮನ್ನಾ ಮಾಡಿದ ಅಸಲು ಮತ್ತು ಬಡ್ಡಿ ಮೊಬಲಗು ಸುಮಾರು 2300.00 ಕೋಟಿ ಎಂದು ಅಂದಾಜಿಸಲಾಗಿದೆ. ಎಲ್ಲಾ ಜಿಲ್ಲೆಗಳಿಂದ ದೃಢೀಕೃತ ಬಿಲ್ಲುಗಳು ಬಂದ ನಂತರ ನಿಖರವಾದ ಮಾಹಿತಿಯು ಲಭ್ಯವಾಗುತ್ತದೆ.

ಆ) ಸರ್ಕಾರವು ಇದುವರೆಗೆ 750.00 ಕೋಟಿ ರೂ.ಗಳನ್ನು ಸಹಕಾರಿ ಸಂಸ್ಥೆಗಳಿಗೆ ಭರಿಸಿಕೊಟ್ಟಿರುತ್ತದೆ. ಉಳಿದ ಮೊಬಲಗನ್ನು ಆದಷ್ಟು ಬೇಗ ಭರಿಸಿಕೊಡಲು ಕ್ರಮ ಕೈಗೊಳ್ಳಲಾಗುವುದು.

ಇ) ಇಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

1539 ಶ್ರೀ ವೈಜನಾಥ್ ಪಾಟೀಲ್ (ಚಿಂಚೋಳಿ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕಳಪೆ ಬೀಜಗಳ ಮಾರಾಟದ ಪ್ರಕರಣಗಳು ಪತ್ತೆಯಾಗಿರುವುದೆಷ್ಟು;

ಆ) ಇಂತಹ ಪ್ರಕರಣಗಳಲ್ಲಿ ವಿವಿಧ ಕಂಪನಿಗಳಿಂದ ರೈತರಿಗೆ ಪರಿಹಾರ ನೀಡಲು ಸರ್ಕಾರದ ಕ್ರಮಗಳೇನು;